A-PDF Merger DEMO : Purchase from www.A-PDF.com to remove the watermark

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ :** ಚನ್ನಪಟ್ಟಣ ಟೌನ್‌ನಲ್ಲಿ ನಿರ್ಮಾಣವಾಗುತ್ತಿರುವ ಡಾ||ಬಿ.ಆರ್.ಅಂಬೇಡ್ಕರ್ ಭವನದ ಕಾಮಗಾರಿಯನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನವನ್ನು ನೀಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರದ ಆದೇಶ ಸಂಖ್ಯೆ: ಸಕಇ 344 ಪಕವಿ 2009, ದಿನಾಂಕ: 29-06-2010.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 344 ಪಕವಿ 2009, ದಿನಾಂಕ: 07-08-2010.
3) ಸರ್ಕಾರದ ಆದೇಶ ಸಂಖ್ಯೆ: ಸಕಇ 180 ಪಕವಿ 2011, ದಿನಾಂಕ: 28-09-2011.
4) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಪತ್ರ ಸಂಖ್ಯೆ: ಸಕಇ/ಸಿಎಸ್-1/ಸಿಆರ್-41/2009-10, ದಿ:05-08-2013.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶ ದಿನಾಂಕ: 29-06-2010 ರಲ್ಲಿ ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ಡಾ||ಬಿ.ಆರ್.ಅಂಬೇಡ್ಕರ್ ಭವನ ನಿರ್ಮಿಸಲು ಹಲವು ಷರತ್ತುಗಳಿಗೆ ಒಳಪಟ್ಟು ರೂ.200.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿನ ಸರ್ಕಾರದ ಆದೇಶ ದಿನಾಂಕ: 27-08-2010 ರ ಆದೇಶದಲ್ಲಿ ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ಡಾ||ಬಿ.ಆರ್.ಅಂಬೇಡ್ಕರ್ ಭವನವನ್ನು ರೂ.200.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿತ್ತು.

ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿನ ಸರ್ಕಾರದ ಆದೇಶ ದಿನಾಂಕ: 28-09-2011 ರಲ್ಲಿ ಹೊರಡಿಸಲಾಗಿರುವ ಮಾರ್ಗಸೂಚಿಗಳಗನುಸಾರ ತಾಲ್ಲೂಕು ಕೇಂದ್ರದಲ್ಲಿ ಡಾ||ಬಿ.ಆರ್.ಅಂಬೇಡ್ಕರ್ ಭವನ ನಿರ್ಮಿಸಲು ರೂ.100.00 ಲಕ್ಷಗಳ ಅನುದಾನ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಸಂಖ್ಯೆ (4) ರ ಪತ್ರದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ರಾಮನಗರ ಜಿಲ್ಲೆಯ ಚನ್ನಪಟ್ಟಣ ಟೌನ್‌ನಲ್ಲಿ ನಿರ್ಮಾಣವಾಗುತ್ತಿರುವ ಡಾ||ಬಿ.ಆರ್.ಅಂಬೇಡ್ಕರ್ ಭವನದ ಕಾಮಗಾರಿಯನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವಂತೆ ಸಂಬಂಧಪಟ್ಟ ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ಶಾಸಕರು ಕೋರಿರುವುದಾಗಿ ತಿಳಿಸಿ ಹೆಚ್ಚುವರಿ ಅನುದಾನ ಮಂಜೂರು ಮಾಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

----2

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 178 ಪಕವಿ 2013, ಬೆಂಗಳೂರು ದಿನಾಂಕ: 28-02-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ರಾಮನಗರ ಜಿಲ್ಲೆಯ ಚನ್ನಪಟ್ಟಣ ಟೌನ್‌ನಲ್ಲಿ ನಿರ್ಮಾಣವಾಗುತ್ತಿರುವ ಡಾ||ಬಿ.ಆರ್.ಅಂಬೇಡ್ಕರ್ ಭವನದ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ರೂ.50.00 ಲಕ್ಷಗಳನ್ನು (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

**ಷರತ್ತುಗಳು:-**

(1) ಸದರಿ ಭವನ ನಿರ್ಮಾಣ ಉಸ್ತುವಾರಿಯನ್ನು ಜಿಲ್ಲಾಧಿಕಾರಿ/ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ರಾಮನಗರ ಇವರು ನೋಡಿಕೊಳ್ಳತಕ್ಕದ್ದು.

(2) ಈ ಉದ್ದೇಶಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಪೂರ್ಣವಾಗಿ ಬಳಕೆ ಮಾಡಿ, ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

(3) ಸರ್ಕಾರದಿಂದ ಈಗಾಗಲೇ ರೂ.200.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಈಗ ಹೆಚ್ಚುವರಿಯಾಗಿ ರೂ.50.00 ಲಕ್ಷಗಳನ್ನು ಮಂಜೂರು ಮಾಡಿರುವುದರಿಂದ ಪುನಃ ಸರ್ಕಾರದಿಂದ ಯಾವುದೇ ಹೆಚ್ಚುವರಿ ಅನುದಾನವನ್ನು ನೀಡಲಾಗುವುದಿಲ್ಲ.

(4) ವಾಸ್ತವಿಕ ವೆಚ್ಚ ಮೀರಿದ್ದಲ್ಲಿ, ಉಳಿದ ಅನುದಾನವನ್ನು ಸ್ಥಳೀಯ ಸಂಸ್ಥೆಗಳಿಂದ ಕ್ರೋಢೀಕರಿಸಿ ಭರಿಸತಕ್ಕದ್ದು.

(5) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ - (1999) ಹಾಗೂ ಅದರಡಿ ರೂಪಿಸಿರುವ ನಿಯಮಗಳಲ್ಲಿ ನಿಗಧಿಗೊಳಿಸಿರುವ "ಕಾರ್ಯವಿಧಾನ" (procedure) ಪಾಲಿಸತಕ್ಕದ್ದು.

ಈ ಸಂಬಂಧದ ವೆಚ್ಚವನ್ನು 2013-14 ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆಯ ಕ್ರೋಢೀಕೃತ ಅನುದಾನ ಲೆಕ್ಕ ಶೀರ್ಷಿಕೆ "2225-01-102-0-08" (ಯೋಜನೆ) ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ: 10-05-2013 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1.
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:-**

1) ಮಹಾಲೇಖಪಾಲರು (ಎ&ಇ. ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2).
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಜಿಲ್ಲೆ.
4) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ರಾಮನಗರ ಜಿಲ್ಲೆ.
5) ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳು, ಚನ್ನಪಟ್ಟಣ ತಾಲ್ಲೂಕು, ರಾಮನಗರ ಜಿಲ್ಲೆ.
6) ಶ್ರೀ.ಸಿ.ವೆಂಕಟಾಚಲಯ್ಯ, ಜಿಲ್ಲಾ ಸದಸ್ಯರು, ಡಾ||ಅಂಬೇಡ್ಕರ್ ಹಾಗೂ ಇತರೇ ಭವನಗಳ ಕಮಿಟಿ, ಚರ್ಚ್‌ರಸ್ತೆ, ಶೆಟ್ಟಿಹಳ್ಳಿ, ಚನ್ನಪಟ್ಟಣ ಟೌನ್, ರಾಮನಗರ ಜಿಲ್ಲೆ.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.